**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ 1040/2021** **CW-6** **PW-5**

**ಸಾಕ್ಷಿಯನ್ನು ದಿಃ 14.08.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ಶಿವರಾಜ್ |
| ತಂದೆಯ ಹೆಸರುಃ | ಪುಟ್ಟಸ್ವಾಮಿ |
| ವಯಸ್ಸುಃ | 32 ವರ್ಷ |
| ವೃತ್ತಿಃ | ಆಟೋ ಚಾಲಕ |
| ವಾಸ ಸ್ಥಳಃ | ಚನ್ನರಾಯಪಟ್ಟಣ |

**ಮುಖ್ಯವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಸಾಕ್ಷಿಗೆ ಸ್ಥಳ ಮತ್ತು ಅಮಾನತ್ತು ಮಹಜರ್ ಪಂಚನಾಮೆಯನ್ನು ತೋರಿಸಲಾಗಿ ಅದನ್ನು ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-3 ಎಂದು ಸಾಕ್ಷಿಯ ಸಹಿಯನ್ನು ನಿಪಿ-3(ಬಿ ) ಎಂದು ಗುರುತಿಸಲಾಯಿತು.

ಸದರಿ ಸಹಿಯನ್ನು ನಾನು ಸುಮಾರು 2-3 ವರ್ಷಗಳ ಹಿಂದೆ ನಮ್ಮ ಮನೆಯ ಬಳಿ ಮಾಡಿರುತ್ತೇನೆ. ಪೋಲೀಸರು ನಮ್ಮ ಮನೆಯ ಬಳಿ ಬಂದು ಗಲಾಟೆಯ ವಿಚಾರವಾಗಿ ನನ್ನಿಂದ ಬಳಿ ಸಹಿ ಪಡೆದಿರುತ್ತಾರೆ. ಸಮಯ ಗೊತ್ತಿಲ್ಲ. ನನ್ನ ಜೊತೆ ಯಾರು ಸಹಿ ಮಾಡಿರುತ್ತಾರೆ ಎಂದು ಗೊತ್ತಿಲ್ಲ. ನನ್ನ ಸಮಕ್ಷಮ ಯಾವ ವಸ್ತು ಅಮಾನತ್ತುಪಡಿಸಿಕೊಂಡಿಲ್ಲ.

**(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ನಾನು ದಿಃ 25.03.2021 ರಂದು ಸಮಯ ಮದ್ಯಾಹ್ನ 2 ರಿಂದ 3 ಗಂಟೆ ಸಮಯದಲ್ಲಿ ಗಟನಾ ಸ್ಥಳದಲ್ಲಿ ನಾನು ಹಾಜರಿದ್ದು ಪೋಲೀಸರು ಮಹಜರ್ ಕ್ರಮ ಜರುಗಿಸಿ

ನನ್ನಿಂದ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಮತ್ತು ಚಾಸಾ–2, ಚಾಸಾ–5 ರವರ ಸಮಕ್ಷಮ ಕಬ್ಬಿಣದ ರಾಡನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗಳು ನಮ್ಮ ಊರಿನವರೇ ಆಗಿರುವುದರಿಂದ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಕೆ ಎನ್ ಎಸ್ ರವರಿಂದ ಃ**

ಆರೋಪಿ ಪರ ವಕೀಲರು ಪಾಟಿ ಸವಾಲಿಗೆ ಇಲ್ಲ ಎಂದು ನಿವೇದಿಸಿಕೊಂಡಿದ್ದು ಅನುಮತಿಸಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ).

**ಓ ಹೇ ಕೇ ಸರಿ ಇದೆ.**

(ಕುಸುಮ ವಿ .)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ